**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ. 123/2021**

ದಿನಾಂಕಃ **09.09.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ಎಸ್ ಆರ್ ಕುಮಾರನಾಯ್ಕ | ಚಾಸಾ-5, ಪ್ರಾಸ-2 |
| ತಂದೆಯ ಹೆಸರು | ರಂಗನಾಯ್ಕ | |
| ವಯಸ್ಸು | 54 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ | ಸಿದ್ದರಹಳ್ಳಿ | |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ-6 ನನಗೆ ಗೊತ್ತು. ಆರೋಪಿ ನನಗೆ ಗೊತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇಲ್ಲಾ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಈ ಸಂಬಂಧ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಪೋಲಿಸರು ನನಗೆ ನಿಪಿ-1 ರಂತೆ ನೋಟಿಸನ್ನು ಜಾರಿ ಮಾಡಿರುವುದಿಲ್ಲ. ಸಾಕ್ಷಿ ನಿಪಿ-1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 3 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ-4 ರ ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು ಸದರಿ ಛಾಯಾಚಿತ್ರವನ್ನು ಯಾವ ವಿಚಾರವಾಗಿ ಎಲ್ಲಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮುಮಾ ವಶಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ

ದಿಃ 01.05.2020 ರಂದು ಪೋಲಿಸರು ನಿಪಿ-1 ರಂತೆ ನನಗೆ ಯಾವುದೇ ನೋಟಿಸನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ದಿನ ನಿಪಿ-3 ರಂತೆ ನನ್ನ ಮತ್ತು ಚಾಸಾ-6 ರವರ ಸಮಕ್ಷಮ ಸಂಜೆ 6.15 ರಿಂದ 7.00 ರವರೆಗೆ ಮಹಜರನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-4 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಮಹಜರ್ ಸಮಯದಲ್ಲಿ

ಮುಮಾ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.